ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಅ/ಬ್ಯಾ.ವಿ/ಆ.ಅ/ 10 /2019-20.

ಕಾರ್ಯಪಾಲಕ ಅಭಿಯಂತರವರ ಕಛೇರಿ
ಬ್ಯಾಟರಾಯನಪುರ, ಬೃ.ಬೆಂ.ಮ.ಪಾ.
ಬೆಂಗಳೂರು-92
ದಿನಾಂಕ: 21/06/2019.

ಆಡಳಿತಾತ್ಮಕ ಅನುಮೋದನೆ

ವಿಷಯ:- Construction of drains from Chikkasidappa layout to SWD in Amruthahalli in ward no. 07 Byatarayanapura.

ಉಲ್ಲೇಖ:1 ಸರ್ಕಾರದ ಅಧಿಸೂಚನೆ ಪತ್ರದ ಸಂಖ್ಯೆ:ಆಇ 541 ಬೆಚ್ಚ-12/2019 ದಿನಾಂಕ:29.05.2019.

2. ಆಯುಕ್ತರು, ಬಿಬಿಎಂಪಿ ರವರ ಪತ್ರದ ಸಂಖ್ಯೆ:ಬಿಬಿಎಂಪಿ/ಆ/ಪಿಎಸ್ಆರ್/ 10702/2018-19 ದಿನಾಂಕ: 18.02.2019.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಕೊಡಿಗೇಹಳ್ಳಿ ಉಪವಿಭಾಗ) ರವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದಲ್ಲಿ P3111 State Finance commission untied grant works" ರ ಅಡಿಯಲ್ಲಿ ಸದರಿ ಕಾಮಗಾರಿಗೆ ಘನಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ನಿರೀಕ್ಷಿಸಿ ಮುಖ್ಯ ಅಭಿಯಂತರರು, ಯಲಹಂಕ ವಲಯ ರವರಿಂದ ತಾಂತ್ರಿಕ ಮಂಜೂರಾತಿ ಪಡೆದು ಟೆಂಡರ್ ಪ್ರಕ್ರಿಯೆ ಕೈಗೊಳ್ಳಲಾಗಿರುತ್ತದೆ.

ಮುಂದುವರೆದು ಉಲ್ಲೇಖ(1)ರನ್ವಯ ಘನಸರ್ಕಾರದಿಂದ ಸದರಿ ಕಾಮಗಾರಿಗೆ ಘಟನ್ನೋತ್ತರ ಆಡಳಿತಾತ್ಮಕ ಅನುಮೋದನೆ ಹಾಗೂ ಟೆಂಡರ್ ಅನುಮೋದನೆ ನೀಡಲಾಗಿರುತ್ತದೆ. ಆದ್ದರಿಂದ ಸದರಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011-12 ದಿನಾಂಕ:02-09-2015ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ.

ಷರತ್ತುಗಳು:

1. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
2. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
3. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
4. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
5. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ-ಬಿಎಂ-ಬಿಸಿ /WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.
6. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

21/06

ಕಾರ್ಯಪಾಲಕ ಅಭಿಯಂತರರವರು
ಬ್ಯಾಟರಾಯನಪುರ ವಿಭಾಗ
ಬೃ.ಬೆ.ಮ.ಪಾ. ಬೆಂಗಳೂರು-92

21/06

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
2. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೊಡಿಗೇಹಳ್ಳಿ ಉಪವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ, ಸೂಕ್ತ ಕ್ರಮಕ್ಕಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೇಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.